# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1104** |
| ಸದಸ್ಯರ ಹೆಸರು | : | ಶ್ರೀ ಕೆ.ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 28.12.2022 |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳಲು ಇರುವ ಅರ್ಹತೆ/ಮಾನದಂಡಗಳೇನು; | ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ 95(2)ರಡಿಯಲ್ಲಿ ಕೃಷಿ ಉದ್ದೇಶಕ್ಕಾಗಿ ಹೊಂದಿರುವ ಭೂಮಿಯ ಅಧಿಭೋಗದಾರನು ಅಂತಹ ಜಮೀನನ್ನು ಅಥವಾ ಅದರ ಯಾವುದೇ ಭಾಗವನ್ನು ಕೃಷಿಯೇತರ ಉದ್ದೇಶಕ್ಕಾಗಿ ಪರಿವರ್ತಿಸಲು ಇಚ್ಛಿಸಿದರೆ, ಜಿಲ್ಲಾಧಿಕಾರಿಯವರಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಜಿಲ್ಲಾಧಿಕಾರಿಯು ನಿಯಮಗಳಿಗೆ ಒಳಪಟ್ಟು ಅನುಮತಿಯನ್ನು ನಿರಾಕರಿಸಬಹುದು ಅಥವಾ ತಾನು ಯುಕ್ತವೆಂದು ಆಲೋಚಿಸುವಂತ ಷರತ್ತುಗಳಿಗೆ ಒಳಪಟ್ಟು ಕೊಡಬಹುದು.<br><br>ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 96(1)ರಲ್ಲಿ ಕಂದಾಯ ವಿಧಿಸಲಾದ ಅಥವಾ ಬೇಸಾಯದ ಉದ್ದೇಶಕ್ಕಾಗಿ ಹೊಂದಿದ ಯಾವುದೇ ಭೂಮಿಯನ್ನು ಜಿಲ್ಲಾಧಿಕಾರಿಯ ಅನುಮತಿ ಇಲ್ಲದೇ ಅಥವಾ 95ನೇ ಪ್ರಕರಣದ ನಿಯಮಿಸಲಾದ ಅವಧಿಯು ಕೊನೆಗೊಳ್ಳುವುದಕ್ಕೆ ಮುಂಚೆ ಇತರೆ ಉದ್ದೇಶಕ್ಕಾಗಿ ಬದಲಿಸಿದರೆ ಅಥವಾ ಉಪಯೋಗಿಸಿದರೆ ಜಿಲ್ಲಾಧಿಕಾರಿಯು ಅಧಿಭೋಗದಾರನನ್ನು ಅಥವಾ ಜವಾಬ್ದಾರನಾಗಿರುವ ವ್ಯಕ್ತಿಯನ್ನು ಉದ್ದೇಶ ಬದಲಿಸಿದ ಭೂಮಿಯಿಂದ ಹೊರದೂಡಬಹುದು ಮತ್ತು ಅದರ ಮೇಲೆ ನಿರ್ಮಿಸಲಾದ ಯಾವುದೇ ಕಟ್ಟಡವನ್ನು ಅಥವಾ ನಿರ್ಮಾಣವನ್ನು ಜಿಲ್ಲಾಧಿಕಾರಿಯು ಯುಕ್ತವೆಂದು ಭಾವಿಸುವ ಲಿಖಿತ ನೋಟೀಸನ್ನು ಕೊಟ್ಟ ತರುವಾಯವೂ ತೆಗೆದುಹಾಕದಿದ್ದರೆ ಅದು ಮುಟ್ಟುಗೋಲಿಗೆ ಅಥವಾ ಕೂಡಲೇ ತೆಗೆದುಹಾಕುವಿಕೆಗೆ ಗುರಿಯಾಗತಕ್ಕದು ಎಂದು ತಿಳಿಸಲಾಗಿದೆ.<br><br>ಆದರೆ, ಅರ್ಜಿದಾರರು ಭೂ ಪರಿವರ್ತನೆಗೆ ಅರ್ಜಿ ಸಲ್ಲಿಸಿದಾಗ ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 96(4)ರನ್ವಯ ಈ ಪ್ರಕರಣದಲ್ಲಿ ಏನೇ ಒಳಗೊಂಡಿದ್ದರೂ ಕಂದಾಯ ವಿಧಿಸಲಾಗಿರುವ ಅಥವಾ ಬೇಸಾಯದ ಉದ್ದೇಶಕ್ಕೆ ಹೊಂದಿರುವ ಯಾವುದೇ ಭೂಮಿಯನ್ನು ಯಾವುದೇ ಇತರೆ ಉದ್ದೇಶಕ್ಕಾಗಿ ಜಿಲ್ಲಾಧಿಕಾರಿಯ ಅನುಮತಿಯಿಲ್ಲದೇ ಕಟ್ಟಡಗಳನ್ನು ಕಟ್ಟುವುದು ಅಥವಾ ಉಪಯೋಗ ಮಾಡಿದ್ದಕ್ಕಾಗಿ ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ 96(4)ರನ್ವಯ ದಂಡ ವಿಧಿಸಿ, ಭೂ ಪರಿವರ್ತನೆಗೊಳಿಸಲು ಅವಕಾಶ ಕಲ್ಪಿಸಲಾಗಿದೆ. |
| ಆ) | ದಾವಣಗೆರೆ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆಯೇ; ಇದ್ದಲ್ಲಿ ಕೃಷಿಯೇತರ ಉದ್ದೇಶಕ್ಕಾಗಿ ಸ್ವೀಕೃತವಾದ ಮನವಿಗಳೆಷ್ಟು; ಇತ್ಯರ್ಥವಾದ ಮನವಿಗಳೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು) | ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳಲು ಸ್ವೀಕೃತವಾದ ಮತ್ತು ಇತ್ಯರ್ಥವಾದ ಮನವಿಗಳ ತಾಲ್ಲೂಕುವಾರು ವಿವರ ಈ ಕೆಳಗಿನಂತಿದೆ:- |

| ತಾಲ್ಲೂಕು | 2020 | | 2021 | | 2022 | |
|---|---|---|---|---|---|---|
| | ಸ್ವೀಕೃತಿ | ವಿಲೇ | ಸ್ವೀಕೃತಿ | ವಿಲೇ | ಸ್ವೀಕೃತಿ | ವಿಲೇ |
| ದಾವಣಗೆರೆ | 310 | 310 | 958 | 958 | 600 | 519 |
| ಹರಿಹರ | 69 | 69 | 238 | 238 | 156 | 142 |
| ಜಗಳೂರು | 33 | 33 | 274 | 274 | 202 | 188 |
| ಹೊನ್ನಾಳಿ | 101 | 101 | 385 | 385 | 263 | 236 |
| ನ್ಯಾಮತಿ | 31 | 31 | 138 | 138 | 99 | 86 |
| ಚನ್ನಗಿರಿ | 110 | 110 | 553 | 553 | 434 | 388 |
| **ಒಟ್ಟು** | **654** | **654** | **2546** | **2546** | **1754** | **1559** |

.......2

| | | |
|---|---|---|
| ಇ) | ದಾವಣಗೆರೆ ಜಿಲ್ಲೆಯಲ್ಲಿ ಕೃಷಿ ಜಮೀನನ್ನು ವಾಸದ ಉದ್ದೇಶಕ್ಕಾಗಿ ಅನಧಿಕೃತವಾಗಿ ಉಪಯೋಗಿಸಿಕೊಂಡು ಸಕ್ರಮಗೊಂಡಿರುವ ಜಮೀನುಗಳೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು) | ದಾವಣಗೆರೆ ಜಿಲ್ಲೆಯಲ್ಲಿ ಕೃಷಿ ಜಮೀನನ್ನು ವಾಸದ ಉದ್ದೇಶಕ್ಕಾಗಿ ಅನಧಿಕೃತವಾಗಿ ಉಪಯೋಗಿಸಿಕೊಂಡು ಸಕ್ರಮಗೊಂಡಿರುವ ಯಾವುದೇ ಪ್ರಕರಣಗಳು ಇರುವುದಿಲ್ಲ. |
| ಈ) | ಸರ್ಕಾರಿ ಜಮೀನುಗಳ ಸಂರಕ್ಷಣೆಗೆ ಸರ್ಕಾರ ರಚಿಸಿರುವ ಕಾರ್ಯಪಡೆಯ ಕಾರ್ಯಗಳೇನು; | ಸರ್ಕಾರಿ ಜಮೀನಿನ ಒತ್ತುವರಿಯನ್ನು ತೆರವುಗೊಳಿಸಲು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ, ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಕಾರ್ಯಪಡೆಗಳನ್ನು ರಚಿಸಲಾಗಿದೆ. ಅದರಂತೆ ಎಲ್ಲಾ ಜಿಲ್ಲಾಧಿಕಾರಿಗಳು, ಕಾಲಬದ್ಧ ಕ್ರಿಯಾ ಯೋಜನೆ ಸಿದ್ಧಪಡಿಸಿಕೊಂಡು, ಒತ್ತುವರಿ ಆಗಿರುವ ಸರ್ಕಾರಿ ಜಮೀನುಗಳನ್ನು ತೆರವುಗೊಳಿಸಲು ಕ್ರಮವಹಿಸುತ್ತಿದ್ದಾರೆ.<br><br>ಒತ್ತುವರಿ ಪ್ರಕರಣಗಳನ್ನು ಸಮರ್ಥವಾಗಿ ತಡೆಯುವ ಸಲುವಾಗಿ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯವನ್ನು ರಚಿಸಲಾಗಿದೆ. ಒತ್ತುವರಿದಾರರ ವಿರುದ್ಧ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ, ಪ್ರಕರಣವನ್ನು ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ಕಲಂ 192-ಎ ರನ್ವಯ ದಾಖಲಿಸಲಾಗುತ್ತಿದೆ.<br><br>ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 20 ಎಲ್‌ಜಿಪಿ 2020, ದಿನಾಂಕ: 20.01.2020 ರಂತೆ ಸರ್ಕಾರಿ ಜಮೀನು ಒತ್ತುವರಿ ತೆರವುಗೊಳಿಸುವುದು, ಒತ್ತುವರಿದಾರರ ವಿರುದ್ಧ ಕ್ರಮ ಜರುಗಿಸುವುದು, ಒತ್ತುವರಿ ತೆರವುಗೊಳಿಸಲು ವಿಫಲರಾಗಿರುವ ಅಧಿಕಾರಿಗಳು/ಭೂ ಕಬಳಿಕೆಗೆ ಪ್ರೇರಣೆ ನೀಡಲು ನಕಲಿ ದಾಖಲೆಗಳನ್ನು ಸೃಷ್ಟಿಸಲು ಶಾಮೀಲಾಗಿರುವ ಅಧಿಕಾರಿ/ ಸಿಬ್ಬಂದಿಗಳ ವಿರುದ್ಧ ಕಾನೂನು/ಶಿಸ್ತು ಕ್ರಮಗಳನ್ನು ಜರುಗಿಸಲು ಸೂಚನೆ ನೀಡಲಾಗಿದೆ.<br><br>ರಾಜ್ಯದಲ್ಲಿರುವ ಸರ್ಕಾರಿ ಜಮೀನುಗಳ ಒತ್ತುವರಿ ತೆರವುಗೊಳಿಸಲು ಹಾಗೂ ಸಂರಕ್ಷಿಸಲು ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 15 ಎಲ್‌ಜಿಪಿ 2020; ದಿನಾಂಕ:29.01.2020ರ ಆದೇಶದ ಮೂಲಕ ಸದಸ್ಯರುಗಳನ್ನೊಳಗೊಂಡಂತೆ "ಸರ್ಕಾರಿ ಜಮೀನುಗಳ ಸಂರಕ್ಷಣಾ ಸಮಿತಿ" ಯನ್ನು ರಚಿಸಲಾಗಿದೆ, ಸದರಿ ಸಮಿತಿಯು ಜಿಲ್ಲೆಗಳ ಸರ್ಕಾರಿ ಜಮೀನುಗಳಿಗೆ ಸಂಬಂಧಿಸಿದಂತೆ ಪ್ರತಿ ವಾರವೂ ಪರಿಶೀಲನಾ ಸಭೆಯನ್ನು ನಡೆಸುತ್ತಿದ್ದು, ಭೂ ಕಬಳಿಕೆ ತಡೆಯುವ ನಿಟ್ಟಿನಲ್ಲಿ ಅಗತ್ಯ ನಿರ್ದೇಶನಗಳನ್ನು ಸರ್ಕಾರಕ್ಕೆ ಕಾಲಕಾಲಕ್ಕೆ ನೀಡಲಾಗುತ್ತಿದೆ. |

**ಆರ್‌ಡಿ 118 ಎಲ್‌ಜಿಸಿ 2022**

**(ಆರ್.ಅಶೋಕ)**
**ಕಂದಾಯ ಸಚಿವರು**